## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **679**

ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀಮತಿ ಬಲ್ಕೀಸ್ ಬಾನು

(ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : **18.08.2025**

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಬಿಪಿಎಲ್ ಪಡಿತರ ಚೀಟಿಗಳನ್ನು ಎಪಿಎಲ್ ಪಡಿತರ ಚೀಟಿಗಳಾಗಿ ವರ್ಗಾಯಿಸಿರುವುದು ನಿಜವೇ; (ಜಿಲ್ಲಾವಾರು ಮಾಹಿತಿ ನೀಡುವುದು) | ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳ ವಿರುದ್ಧವಾಗಿ ಆದ್ಯತಾ ಪಡಿತರ ಚೀಟಿ ಪಡೆದ ಅಂದರೆ ಆದಾಯ ತೆರಿಗೆ ಪಾವತಿದಾರರು, ಸರ್ಕಾರಿ ನೌಕರರು, 1.20 ಲಕ್ಷಕ್ಕಿಂತ ಹೆಚ್ಚು ಇರುವ ಕುಟುಂಬಗಳು ಹಾಗೂ 6 ತಿಂಗಳಿಗಿಂತ ಹೆಚ್ಚು ಅವಧಿಗೆ ಪಡಿತರ ಪಡೆಯದೇ ಇರುವ ಒಟ್ಟು 3,62,254 ಪಡಿತರ ಚೀಟಿದಾರರ ವಿವರಗಳನ್ನು ಕುಟುಂಬ ತಂತ್ರಾಂಶದಿಂದ ಪಡೆದು ಸದರಿ ಪಡಿತರ ಚೀಟಿಗಳನ್ನು ರದ್ದು/ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗಿತ್ತು.<br>ಸರ್ಕಾರದ ಪತ್ರ ಸಂಖ್ಯೆ: ಆನಾಸ 337 ಡಿಆರ್‌ಎ/2024, ದಿನಾಂಕ:22-11-2024ರ ರಲ್ಲಿನ ನಿರ್ದೇಶನದ ಮೇರೆಗೆ ಆದಾಯ ತೆರಿಗೆ ಪಾವತಿದಾರರು ಹಾಗೂ ಸರ್ಕಾರಿ ನೌಕರರನ್ನು ಹೊರತುಪಡಿಸಿ ಉಳಿದ ಎಲ್ಲಾ ಪಡಿತರ ಚೀಟಿಗಳನ್ನು ಆದ್ಯತಾ ಪಡಿತರ ಚೀಟಿಗಳನ್ನಾಗಿ ಮರು ಸ್ಥಾಪಿಸಲಾಗಿರುತ್ತದೆ. |
| ಆ | ಇದರಿಂದ ಕೂಲಿ ಕಾರ್ಮಿಕರು, ಆಟೋ ಚಾಲಕರಿಗೆ, ಬೀದಿ ಬದಿ ವ್ಯಾಪಾರಿಗಳು ಮತ್ತು ಇತರೆ ಕಾರ್ಮಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ | ಬಂದಿದ್ದಲ್ಲಿ ಸದರಿಯವರಿಗೆ ಮತ್ತೆ ಬಿಪಿಎಲ್ ಪಡಿತರ ಚೀಟಿಗಳನ್ನಾಗಿ ವರ್ಗಾಯಿಸಲು ಎಷ್ಟು ಸಮಯಾವಕಾಶ ಬೇಕಾಗುತ್ತದೆ; (ವಿವರ ನೀಡುವುದು) | |
| ಈ | ಈ ಎಪಿಎಲ್ ಕಾರ್ಡ್‌ಗಳಿಂದ ಭಾಗ್ಯಲಕ್ಷ್ಮಿ, ಸೌಲಭ್ಯ ಪಡೆಯಲು ಕ್ಯಾನ್ಸರ್, ಹೃದಯ ಚಿಕಿತ್ಸೆ, ಕಿಡ್ನಿ ಸಮಸ್ಯೆ ಮುಂತಾದ ಮಾರಣಾಂತಿಕ ಕಾಯಿಲೆಗಳಿಗೆ ಉಚಿತ ಅಥವಾ ರಿಯಾಯಿತಿ ಚಿಕಿತ್ಸೆ ಪಡೆಯಲು ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ತುರ್ತು ವೈದ್ಯಕೀಯ ಪರಿಸ್ಥಿತಿ ಹಿನ್ನೆಲೆ ಇರುವ ಅರ್ಹರಿಗೆ, ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಹಾಗೂ PVTG's ರಡಿ ಬರುವ ಬುಡಕಟ್ಟು ಸಮುದಾಯದವರಿಗೆ ಪಡಿತರ ಚೀಟಿಯನ್ನು ಕಾಲಕಾಲಕ್ಕೆ ವಿತರಿಸಲು ಕ್ರಮವಹಿಸಲಾಗುತ್ತಿದೆ. |
| ಉ | ಬಂದಿದ್ದಲ್ಲಿ ಬಡವರ ಅನುಕೂಲಕ್ಕಾಗಿ ಸರ್ಕಾರವು ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | |

ಇ-ಆನಾಸ 222 ಡಿಆರ್‌ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು